**ಕರ್ನಾಟಕ ಸರ್ಕಾರ**

ಸಂಖ್ಯೆ: ನಅಇ 578 ಮೈಅಪ್ರಾ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ, 4ನೇ ಮಹಡಿ,
ಬೆಂಗಳೂರು, ದಿನಾಂಕ: 30.09.2020

**ಸುತ್ತೋಲೆ**

**ವಿಷಯ:** ರಾಜ್ಯದ ಸ್ಥಳೀಯ ಸಂಸ್ಥೆಗಳು ಯಾವುದೇ ಕೃಷಿ ಜಮೀನನ್ನು ಭೂ ಮಾಲೀಕರಿಂದ ನೇರವಾಗಿ ಹಸ್ತಾಂತರಿಸಿಕೊಳ್ಳದಿರುವ ಬಗ್ಗೆ ಸೂಚನೆಗಳು.

~*~ *~ *~ *

ರಾಜ್ಯದಲ್ಲಿನ ಎಲ್ಲಾ ಸ್ಥಳೀಯ ಸಂಸ್ಥೆಗಳು/ನಗರಾಭಿವೃದ್ಧಿ ಪ್ರಾಧಿಕಾರಗಳು/ಯೋಜನಾ ಪ್ರಾಧಿಕಾರಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಯಾವುದೇ ವಿಧವಾದ ಕೃಷಿ ಜಮೀನನ್ನು ಭೂ ಮಾಲೀಕರಿಂದ ನೇರವಾಗಿ ಹಸ್ತಾಂತರಿಸಿಕೊಳ್ಳಬೇಕಾದ ಸಂದರ್ಭ ಬಂದಲ್ಲಿ, ಈ ಕೆಳಗಿನ ನಿರ್ದೇಶನಗಳನ್ನು ತಪ್ಪದೇ ಪಾಲಿಸಬೇಕಾಗಿ ಸೂಚಿಸಲಾಗಿದೆ.

1. ಕೃಷಿ ಜಮೀನನ್ನು ಭೂ ಪರಿವರ್ತಿಸಿ ವಿನ್ಯಾಸ ಅನುಮೋದನೆ ಪಡೆಯದೇ ನೇರವಾಗಿ ಸ್ಥಳೀಯ ಸಂಸ್ಥೆಗಳು ರಸ್ತೆಗಾಗಿ ಭೂ ಮಾಲೀಕರುಗಳಿಂದ ಹಸ್ತಾಂತರಿಸಿಕೊಳ್ಳುವುದು ಯೋಜನಾ ದೃಷ್ಟಿಯಿಂದ ಸೂಕ್ತವಲ್ಲದ ಕಾರಣ ಯಾವುದೇ ಕೃಷಿ ಜಮೀನನ್ನು ರಸ್ತೆಗಾಗಿ ಹಸ್ತಾಂತರಿಸಿಕೊಳ್ಳಬೇಕಾದ ಅನಿವಾರ್ಯ ಸಂದರ್ಭಗಳು ಒದಗಿಬಂದಲ್ಲಿ, ಅಂತಹ ಸಂದರ್ಭಗಳಲ್ಲಿ ಸಂಬಂಧಿಸಿದ ನಗರಾಭಿವೃದ್ಧಿ/ಯೋಜನಾ ಪ್ರಾಧಿಕಾರಗಳು/ ಸಹಾಯಕ ನಿರ್ದೇಶಕರುಗಳಿಂದ ಪರಿಶೀಲಿಸಿಕೊಂಡು ತಾಂತ್ರಿಕ ಅಭಿಪ್ರಾಯ ಪಡೆದು ಸಂಬಂಧಿತ ಜಿಲ್ಲಾಧಿಕಾರಿಗಳು ಕಂದಾಯ ಕಾಯ್ದೆಯಡಿ ಅಧಿಸೂಚನೆ ಹೊರಡಿಸಿದ ನಂತರ ಸ್ಥಳೀಯ ಸಂಸ್ಥೆಗಳು ಹಸ್ತಾಂತರಿಸಿಕೊಳ್ಳಲು ಕ್ರಮ ಕೈಗೊಳ್ಳುವುದು.

2. ಸ್ಥಳೀಯ ಸಂಸ್ಥೆಗಳು, ವ್ಯವಸಾಯ ಜಮೀನುಗಳಲ್ಲಿನ ಜಾಗವನ್ನು ರಸ್ತೆಯೆಂದು ಭೂ ಮಾಲೀಕರು ಪರಿತ್ಯಾಜನ ಪತ್ರದ ಮೂಲಕ ನೀಡಿದಲ್ಲಿ ಅಂತಹ ಜಾಗಗಳನ್ನು ಹಸ್ತಾಂತರಿಸಿಕೊಳ್ಳಬಾರದು.

(ಸಿ.ಎಸ್. ಶಿವಕುಮಾರಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
(ಅಭಿವೃದ್ಧಿ ಪ್ರಾಧಿಕಾರ & ನಯೋಸೇ)
ನಗರಾಭಿವೃದ್ಧಿ ಇಲಾಖೆ.

8/10/2020

**ಇವರಿಗೆ:**

ಸಂಕಲನಾಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು-ಸದರಿ ಸುತ್ತೋಲೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ, 25 ಪ್ರತಿಗಳನ್ನು, ಈ ಸಚಿವಾಲಯಕ್ಕೆ ಒದಗಿಸುವುದು.

**ಪ್ರತಿ:-** ಸೂಕ್ತ ಕ್ರಮಕ್ಕಾಗಿ,

1. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು.

....2,

2. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
4. ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳ ಆಯುಕ್ತರುಗಳು.
5. ರಾಜ್ಯದ ಎಲ್ಲಾ ಸ್ಥಳೀಯ ನಗರ ಯೋಜನಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು.
6. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.